# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 291 (2295) |
| ಸದಸ್ಯರ ಹೆಸರು | ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 21.03.2022 |
| ಉತ್ತರಿಸಬೇಕಾದವರು | ಉನ್ನತ ಶಿಕ್ಷಣ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; ಎಷ್ಟು ಕಾಲೇಜುಗಳಲ್ಲಿ ಪ್ರಾಂಶುಪಾಲರ ಹುದ್ದೆಗಳು ಖಾಲಿ ಇವೆ; | ರಾಜ್ಯದಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ: 440. ಈ ಕಾಲೇಜುಗಳ ಪೈಕಿ ಒಟ್ಟು 412 ಪ್ರಾಂಶುಪಾಲರ ಹುದ್ದೆಗಳು ಮಂಜೂರಾಗಿದ್ದು, ಪ್ರಸ್ತುತ, ಎಲ್ಲಾ ಹುದ್ದೆಗಳೂ ಖಾಲಿ ಇರುತ್ತವೆ. ಸದರಿ ಕಾಲೇಜುಗಳಲ್ಲಿ ಆಡಳಿತಾತ್ಮಕ ಹಾಗೂ ಶೈಕ್ಷಣಿಕ ಕೆಲಸ ಕಾರ್ಯಗಳನ್ನು ಸುಗಮವಾಗಿ ಹಾಗೂ ಸಮರ್ಪಕವಾಗಿ ನಿರ್ವಹಿಸಲು ಅನುಕೂಲವಾಗುವಂತೆ ಆಯಾ ಕಾಲೇಜುಗಳಲ್ಲಿ ಸೇವಾ ಜೇಷ್ಠತೆಯಲ್ಲಿ ಹಿರಿಯರಾದ ಬೋಧಕರು ಪ್ರಭಾರ ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. |
| (ಆ) | ಈ ಕಾಲೇಜುಗಳಲ್ಲಿ ಪ್ರಭಾರಿ ಪ್ರಾಂಶುಪಾಲರಾಗಿ ಕಾರ್ಯನಿರ್ವಹಿಸುತ್ತಿರುವ ಕಾಲೇಜುಗಳ ಸಂಖ್ಯೆ ಎಷ್ಟು; | |
| (ಇ) | ಎಷ್ಟು ವರ್ಷಗಳಿಂದ ಪ್ರಾಂಶುಪಾಲರ ಹುದ್ದೆಗಳು ಖಾಲಿ ಇವೆ; ಖಾಲಿ ಇರಲು ಕಾರಣ ಏನು; (ವಿವರ ನೀಡುವುದು) | ಪ್ರಾಂಶುಪಾಲರ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ, ಇಲಾಖೆಯ ಪರಿಷ್ಕೃತ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 91 ಡಿಸಿಇ 2004, ದಿನಾಂಕ:25.09.2009 ರಲ್ಲಿ ಜಾರಿಗೊಳಿಸಲಾಗಿದ್ದು, ಸದರಿ ನಿಯಮಗಳಲ್ಲಿ ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ಶೇಕಡ 100 ರಷ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ನಿರ್ಧಿಷ್ಟಪಡಿಸಲಾಗಿರುತ್ತದೆ. ಪರಿಷ್ಕೃತ ವೃಂದ ಮತ್ತು ನೇಮಕಾತಿ ನಿಯಮಗಳು ದಿನಾಂಕ:25.09.2009 ರಂದು ಜಾರಿಗೊಂಡ ನಂತರದಿಂದ ಹಾಗೂ ಕಾಲಕಾಲಕ್ಕೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಖಾಯಂ ಪ್ರಾಂಶುಪಾಲರ ನಿವೃತ್ತಿ/ನಿಧನ ಇತ್ಯಾದಿ ಕಾರಣಗಳಿಂದ ತೆರವಾಗಿರುವ ಪ್ರಾಂಶುಪಾಲರ ಹುದ್ದೆಗಳು ಖಾಲಿ ಇರುತ್ತವೆ.<br><br>ಸರ್ಕಾರವು ಕಾಲೇಜು ಶಿಕ್ಷಣ ಇಲಾಖೆಯಲ್ಲಿ 2006 ರ ಯು.ಜಿ.ಸಿ. ಪರಿಷ್ಕೃತ ವೇತನ ಶ್ರೇಣಿಗಳನ್ನು ಅಳವಡಿಸಿ ಅನುಷ್ಠಾನಗೊಳಿಸಲು ಹೊರಡಿಸಿರುವ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 37 ಯುಎನ್ಇ 2009, ದಿನಾಂಕ:24.12.2009 ರಲ್ಲಿಯೂ ಸಹ ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿದೆ. ಆದುದರಿಂದ, ಪ್ರಾಂಶುಪಾಲರ ಹುದ್ದೆಗೆ ಪದೋನ್ನತಿ ಮೂಲಕ ಭರ್ತಿ ಮಾಡಲು ನಿಯಮಗಳಲ್ಲಿ ಅವಕಾಶ ಇರುವುದಿಲ್ಲ. |
| (ಈ) | ಈ ಕಾಲೇಜುಗಳಲ್ಲಿ ಅರ್ಹತೆ ಇರುವ ಸಹ ಪ್ರಾಧ್ಯಾಪಕರನ್ನು ಪದೋನ್ನತಿಯಿಂದ ಪ್ರಾಂಶುಪಾಲರ ಹುದ್ದೆಗೆ ತುಂಬಲು ತೊಂದರೆಗಳೇನು; (ವಿವರ ನೀಡುವುದು) | |

| | | |
|---|---|---|
| (ಉ) | ಖಾಯಂ ಪ್ರಾಂಶುಪಾಲರುಗಳು ಇಲ್ಲದೆ ಗುಣಮಟ್ಟದೊಂದಿಗೆ ಸಮರ್ಪಕವಾಗಿ ಕಾಲೇಜು ನಡೆಸಲು ಸಾಧ್ಯವೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | ಕಾಲೇಜುಗಳಲ್ಲಿ ಆಡಳಿತಾತ್ಮಕ ಹಾಗೂ ಶೈಕ್ಷಣಿಕ ಕೆಲಸ ಕಾರ್ಯಗಳನ್ನು ಸುಗಮವಾಗಿ ಹಾಗೂ ಸಮರ್ಪಕವಾಗಿ ನಿರ್ವಹಿಸಲು ಅನುಕೂಲವಾಗುವಂತೆ ಆಯಾ ಕಾಲೇಜುಗಳಲ್ಲಿ ಸೇವಾ ಜೇಷ್ಠತೆಯಲ್ಲಿ ಹಿರಿಯರಾದ ಅನುಭವಿ ಬೋಧಕರಿಗೆ ಪ್ರಾಂಶುಪಾಲರ ಪ್ರಭಾರವನ್ನು ವಹಿಸುವುದರ ಮೂಲಕ ಕಾಲೇಜಿನ ಆಡಳಿತ ನಿರ್ವಹಣೆಗೆ ಮತ್ತು ಗುಣಾತ್ಮಕ ಶಿಕ್ಷಣಕ್ಕೆ ತೊಂದರೆಯಾಗದಂತೆ ಕ್ರಮವಹಿಸಲಾಗುತ್ತಿದೆ.<br><br>ಪ್ರಸ್ತುತ, ಸರ್ಕಾರದ ಪತ್ರ ಸಂಖ್ಯೆ:ಇಡಿ/01/ಡಿಸಿಇ/2022, ದಿನಾಂಕ:15.03.2022 ರಲ್ಲಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡುವವರೆಗೂ ಕಾಲೇಜಿನ ಆಡಳಿತಾತ್ಮಕ ಮತ್ತು ಶೈಕ್ಷಣಿಕ ಹಿತದೃಷ್ಟಿಯಿಂದ ಇಲಾಖೆಯಲ್ಲಿ ಸೇವಾ ಜೇಷ್ಠತೆಯಲ್ಲಿ ಹಿರಿಯರಾದ ಸಹ/ಸಹಾಯಕ ಪ್ರಾಧ್ಯಾಪಕರನ್ನು ಜೇಷ್ಠತಾ ಪಟ್ಟಿಯ ಆಧಾರದ ಮೇಲೆ ಕೌನ್ಸಿಲಿಂಗ್ ಮೂಲಕ ಷರತ್ತಿಗೊಳಪಟ್ಟು ಅನ್ಯಕಾರ್ಯ ನಿಮಿತ್ತ (ಓಓಡಿ) ಪ್ರಾಂಶುಪಾಲರ ಪ್ರಭಾರದಲ್ಲಿರಿಸಲು ಅನುಮತಿ ನೀಡಲಾಗಿದೆ.<br><br>ಮುಂದುವರೆದು, ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಮಂಜೂರಾಗಿರುವ 412 ಪ್ರಾಂಶುಪಾಲರ ಹುದ್ದೆಗಳಲ್ಲಿ 310 ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ:ಇಡಿ 121 ಡಿಸಿಇ 2018, ದಿನಾಂಕ:11.06.2019 ರಲ್ಲಿ ಅನುಮತಿ ನೀಡಲಾಗಿದ್ದು, ಸದರಿ ಪ್ರಾಂಶುಪಾಲರ ಖಾಲಿ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅಂತಿಮ ವಿಶೇಷ ನೇಮಕಾತಿ ನಿಯಮಾವಳಿಗಳನ್ನು ರೂಪಿಸಿ, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 121 ಡಿಸಿಇ 2018, ದಿನಾಂಕ:09.09.2020 ರಲ್ಲಿ ರಚಿಸಲಾಗಿದೆ. ಸದರಿ ನಿಯಮಗಳನ್ವಯ ಪ್ರಾಂಶುಪಾಲರ ನೇಮಕಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಲು ಶೀಘ್ರದಲ್ಲೇ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಆಯ್ಕೆ ಮಾಡಲು ಚಾಲನೆ ನೀಡಲಾಗುವುದು. |

**ಇಡಿ 94 ಡಿಸಿಇ 2022**

**(ಡಾ. ಅಶ್ವಥ್ ನಾರಾಯಣ ಸಿ.ಎನ್.)**

ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ
ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು